# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 956

**ಸದಸ್ಯರ ಹೆಸರು** : ಶ್ರೀ ಎಂ.ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 14.03.2025.

**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 1,000 ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು 200 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಆಯವ್ಯಯದಲ್ಲಿ ಘೋಷಿಸಿದ್ದು, ಸದರಿ ಕಾರ್ಯವು ಪ್ರಾರಂಭಗೊಂಡಿದೆಯೇ; | 2024-25ನೇ ಸಾಲಿಗೆ ರೂ.85.00 ಕೋಟಿಗಳ ಅನುದಾನ ಬಿಡುಗಡೆಯಾಗಿದ್ದು, ಅದರಲ್ಲಿ 592 ಅಂಗನವಾಡಿ ಕಟ್ಟಡಗಳ ನಿರ್ಮಾಣಕ್ಕೆ ಕ್ರಮವಹಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪ್ರಾರಂಭಗೊಂಡಿದೆ; ಎಷ್ಟು ಜಿಲ್ಲೆಗಳಲ್ಲಿ ಕಾಮಗಾರಿ ಬಾಕಿ ಉಳಿದಿದೆ; ವಿಳಂಬಕ್ಕೆ ಕಾರಣಗಳೇನು; | ರಾಜ್ಯದ 31 ಜಿಲ್ಲೆಗಳ ಪೈಕಿ ಚಾಮರಾಜನಗರ, ಮೈಸೂರು, ಬೆಳಗಾವಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಟ್ಟಡ ನಿರ್ಮಾಣ ಪ್ರಾರಂಭಗೊಂಡಿದೆ. ಉಳಿದ 27 ಜಿಲ್ಲೆಗಳಲ್ಲಿ ಕಾಮಗಾರಿ ಪ್ರಾರಂಭಿಸಲು ಕ್ರಮವಹಿಸಲಾಗಿದೆ.<br><br>ಜಿಲ್ಲೆಗಳಿಂದ ಅನುದಾನ ಸೆಳೆಯುವಿಕೆ, ಏಜೆನ್ಸಿಗೆ ಕಾರ್ಯಾದೇಶ ನೀಡುವಲ್ಲಿ, ನಿವೇಶನ ಪರಿಶೀಲನೆ, ಇಲಾಖೆಯಿಂದ ನಿವೇಶನ ಹಸ್ತಾಂತರ, ಏಜೆನ್ಸಿಗಳಿಂದ ಅಂದಾಜು ಪಟ್ಟಿ ತಯಾರಿಕೆ, ಜಿಲ್ಲಾಡಳಿತದಿಂದ ಅನುಮೋದನೆ ಪಡೆಯುವಲ್ಲಿ, ಇತ್ಯಾದಿಗಳಿಂದ ಅಲ್ಪ ವಿಳಂಬವಾಗಿರುತ್ತದೆ. |
| ಇ) | ಸದರಿ ಕಾಮಗಾರಿಗಳಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ; ಇಲ್ಲಿಯವರೆಗೆ ಎಷ್ಟು ಮೊತ್ತ ಖರ್ಚು ಮಾಡಲಾಗಿದೆ; | ಅಂಗನವಾಡಿ ಕಟ್ಟಡ ಕಾಮಗಾರಿಗಳಿಗೆ ರೂ.60.00 ಕೋಟಿಗಳ ಅನುದಾನವನ್ನು ಮೀಸಲಿರಿಸಲಾಗಿದೆ. ಅದರಲ್ಲಿ ರೂ.56.88 ಕೋಟಿಗಳನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು, ಉಳಿದ ರೂ.3.12 ಕೋಟಿಗಳ ವೆಚ್ಚ ಭರಿಸಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಸ್ವಂತ ಕಟ್ಟಡವಿರುವ ಅಂಗನವಾಡಿಗಳ ಕಟ್ಟಡಗಳು ಶಿಥಿಲಾವಸ್ಥೆಗೆ ತಲುಪಿದ್ದು, ಇವುಗಳ ದುರಸ್ಥಿಗಾಗಿ ಸರ್ಕಾರ ಯೋಜಿಸಿದೆಯೇ; ಇದ್ದಲ್ಲಿ, ದುರಸ್ಥಿ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಗೊಳ್ಳಲಾಗುವುದು? | ರಾಜ್ಯದಲ್ಲಿ ಒಟ್ಟು 6066 ಅಂಗನವಾಡಿ ಕಟ್ಟಡಗಳು ಶಿಥಿಲಾವಸ್ಥೆ / ದುರಸ್ಥಿಯಲ್ಲಿರುತ್ತವೆ. ಸದರಿ ಅಂಗನವಾಡಿ ಕಟ್ಟಡಗಳ ದುರಸ್ಥಿಗಾಗಿ ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯುಮೆಂಟ್ ಯೋಜನೆಯಡಿಯಲ್ಲಿ ಪ್ರಸಕ್ತ ಸಾಲಿಗೆ ಘಟಕ ವೆಚ್ಚ ರೂ.50,000/- ರಂತೆ ಒಟ್ಟು ರೂ.30.33 ಕೋಟಿಗಳ ಅನುದಾನದಲ್ಲಿ 6066 ಅಂಗನವಾಡಿ ಕಟ್ಟಡಗಳ ದುರಸ್ಥಿ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಮಮಇ 81 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು